## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** : ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತ್ ಅಮೃತ ಆರೋಗ್ಯ ಯೋಜನೆ ಜಾರಿಗೊಳಿಸುವ ಬಗ್ಗೆ ಆದೇಶ.

**ಓದಲಾಗಿದೆ** : 2022-23 ನೇ ಆಯವ್ಯಯ ಭಾಷಣದ ಕಂಡಿಕೆ 215.

****

**ಪ್ರಸ್ತಾವನೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಪಕವಾಗಿ ಹರಡುತ್ತಿದ್ದ ಕೋವಿಡ್-19ರ ಸೋಂಕಿನ ನಿಯಂತ್ರಣಕ್ಕಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯತಿ ಮಟ್ಟದಲ್ಲಿ ಕೋವಿಡ್ ಕಾರ್ಯಪಡೆಯನ್ನು ರೂಪಿಸಿ, ಕೋವಿಡ್ ಮುಕ್ತ ಪಂಚಾಯತ್‌ನ್ನು ಮಾಡುವ ಗುರಿಯನ್ನ ಸಾಧಿಸುವತ್ತಾ, ಪಂಚಾಯತಿಗಳು ಹೆಜ್ಜೆಯಿಟ್ಟಿವೆ.

2021-22 ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕರ್ನಾಟಕ ಆರೋಗ್ಯ ಸಂವರ್ಧನಾ ಟ್ರಸ್ಟ್ ಸಹಯೋಗದೊಂದಿಗೆ, ಕೋವಿಡ್ ಸಂದರ್ಭದಲ್ಲಿ ಕೋವಿಡ್ ಸೋಂಕು ತಡೆ ಮತ್ತು ನಿರ್ವಹಣೆ, ಲಸಿಕಾ ಆಂದೋಲನ, ಕ್ಷಯ ರೋಗ ನಿರ್ಮೂಲನೆ, ಅಸಾಂಕ್ರಾಮಿಕ ರೋಗಗಳ ಪತ್ತೆ ಮತ್ತು ನಿರ್ವಹಣೆಯಂತಹ ಪ್ರಮುಖ ಕಾರ್ಯಕ್ರಮಗಳನ್ನು ಗ್ರಾಮ ಪಂಚಾಯತ್ ಆರೋಗ್ಯ ಅಮೃತ ಅಭಿಯಾನದ ಮೂಲಕ ಕೈಗೊಳ್ಳಲಾಯಿತು. ಒಟ್ಟು 14 ಜಿಲ್ಲೆಗಳ 114 ತಾಲ್ಲೂಕುಗಳ 2816 ಗ್ರಾಮಪಂಚಾಯತ್ ಗಳಲ್ಲಿ ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ 2022-23 ನೇ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

"215. ಕೋವಿಡ್ ಸಾಂಕ್ರಾಮಿಕ ರೋಗದ ಸಮಯದಲ್ಲಿ ಪಂಚಾಯತ್ ಆರೋಗ್ಯ ಯೋಜನೆಯಡಿ 2814 ಗ್ರಾಮ ಪಂಚಾಯತಿಗಳಲ್ಲಿ ಆರೋಗ್ಯ ಕಿಟ್‌ನ್ನು ವಿತರಿಸಲಾಗಿದೆ. ಈ ಯೋಜನೆಯನ್ನು ಉಳಿದ 3146 ಗ್ರಾಮ ಪಂಚಾಯತಿಗಳಿಗೂ ವಿಸ್ತರಿಸಲಾಗುವುದಾಗಿ ತಿಳಿಸಲಾಗಿದೆ. "

ಪಂಚಾಯತ್ ಅಮೃತ ಆರೋಗ್ಯ ಯೋಜನೆಯ ಕಾರ್ಯಕ್ರಮದ ಮುಖ್ಯ ಉದ್ದೇಶ, ಗ್ರಾಮೀಣ ಜನತೆಯಲ್ಲಿ ಇರುವಂತಹ ಜೀವನ ಶೈಲಿ ಆಧಾರಿತ ರೋಗಗಳು (Lifestyle disease), ಪ್ರಾಥಮಿಕ ರೋಗ ಪತ್ತೆ ಹಚ್ಚುವಿಕೆ (health screening) ಮಾಡುವುದು ಆಗಿರುತ್ತದೆ. ಈ ರೀತಿಯ health screening ಅನ್ನು ಆಶಾ ಕಾರ್ಯಕರ್ತೆಯರ ಮೂಲಕ ಮಾಡಿ ರೋಗ ಲಕ್ಷಣಗಳು ಇರುವಂತಹ ನಾಗರೀಕರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಅಥವಾ ಜಿಲ್ಲಾ ಆರೋಗ್ಯ ಕೇಂದ್ರಕ್ಕೆ ಕಳುಹಿಸುವ ವ್ಯವಸ್ಥೆ ಕೂಡಾ ಮಾಡಬಹುದಾಗಿದೆ. ಈ ರೀತಿ ಪ್ರಾಥಮಿಕ ರೋಗ ಲಕ್ಷಣಗಳ ಪತ್ತೆ ಹಚ್ಚುವಿಕೆಯ ಮೂಲಕ ಗ್ರಾಮೀಣ ಜನತೆಯಲ್ಲಿ ಇರುವಂತಹ ರೋಗದ ಹೊರೆ (disease burden) ತಗ್ಗಿಸಲು ಅನುಕೂಲವಾಗುತ್ತದೆ. ಗ್ರಾಮ ಪಂಚಾಯತ್ ಆರೋಗ್ಯ ಯೋಜನೆಯನ್ನು ಇನ್ನು 3146 ಗ್ರಾಮ ಪಂಚಾಯತಿಗಳಿಗೂ ವಿಸ್ತರಿಸಲು ಸರ್ಕಾರವು ನಿರ್ಣಯಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: RDPR/88/GPA/2022**
**ಬೆಂಗಳೂರು, ದಿನಾಂಕ: 07.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತ್ ಅಮೃತ ಆರೋಗ್ಯ ಯೋಜನೆಯನ್ನು ರಾಜ್ಯದ 3146 ಗ್ರಾಮ ಪಂಚಾಯತಿಗಳಿಗೆ ವಿಸ್ತರಿಸಿ, ಆರೋಗ್ಯ ಕಿಟ್‌ನ್ನು ವಿತರಿಸಲು ಆದೇಶಿಸಿದೆ.

ಈ ಸಂಬಂಧ ತಗಲುವ ವೆಚ್ಚ ರೂ.1000.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-101-0-09 (ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಕಾರ್ಯಕ್ರಮ ಮತ್ತು ಇತರೆ ಗ್ರಾಮೀಣಾಭಿವೃದ್ಧಿ ಚಟುವಟಿಕೆಗಳು) Object Head: 51 ರಡಿ ಒದಗಿಸಲಾಗಿರುವ ರೂ.1030.00 ಲಕ್ಷಗಳಲ್ಲಿ ಭರಿಸಲು ಆದೇಶಿಸಿದೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯನ್ನು ರೂಪಿಸಲು ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 274 ವೆಚ್ಚ-6 2022(E), ದಿನಾಂಕ: 05-04-2022 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಮ.ಮ. 7/4/22

**(ಎಂ.ಎಂ. ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

7/4/22

**ಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ /ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಗಾಂಧಿ ನಗರ, ಬೆಂಗಳೂರು.
3. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್, ಬೆಂಗಳೂರು
5. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
6. ಎಲ್ಲಾ ಗ್ರಾಮ ಪಂಚಾಯತಿಗಳ ಆಡಳಿತಾಧಿಕಾರಿಗಳು / ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ .
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತ ರವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿ.
8. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.